RW - 1

ದಿನಾಂಕಃ 03.09.2025 ರಂದು ಸಾಕ್ಷಿಗೆ ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ 3 ನೇ ಎದುರುದಾರರ ಪರ ವಕೀಲರಿಂದ -

ನಾನು ನನ್ನ ಮುಖ್ಯ ವಿಚಾರಣೆಯಾಗಿ ಶಪಥ ಪತ್ರವನ್ನು ಹಾಜರುಪಡಿಸಿರುತ್ತೇನೆ. ಶಪಥ ಪತ್ರದಲ್ಲಿ ಬರೆದಿರುವುದನ್ನು ನಾನು ಹೇಳಿ ಬರೆಯಿಸಿದ್ದು, ಬರೆದ ನಂತರ ಅದನ್ನು ನನಗೆ ಓದಿ ಹೇಳಿದ್ದು ನಂತರ ಸಹಿ ಮಾಡಿರುತ್ತೇನೆ. ನನ್ನ ಶಪಥ ಪತ್ರದಲ್ಲಿ ಬರೆದಿರುವುದು ಎಲ್ಲಾ ಸತ್ಯವಾಗಿರುತ್ತದೆ.

Authorisation ಲೆಟರ್ ಅನ್ನು ನಿಆರ್-1 ಎಂದು, ಪಾಲಿಸಿ ಕಾಪಿಯನ್ನು ನಿಆರ್-2, ಆರ್ ಟಿ ಒ ಕಚೇರಿಯ ಹಿಂಬರಹವನ್ನು ನಿಆರ್-3 ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ 1 ನೇ ಎದುರುದಾರರ ಪರ ವಕೀಲರಿಂದ -

ದೂರನ್ನು 1 ನೇ ಎದುರುದಾರನ ಹೆಂಡತಿ ಲಲಿತಾ ನೀಡಿದ್ದಾರೆ. ಪಕ್ಕೀರಪ್ಪ ರವರ ವಿರುದ್ಧ ದೂರು ನೀಡಿದ್ದಾರೆ. ಪೊಲೀಸರು ಇಬ್ಬರ ವಿರುದ್ಧರೂ ಅಂತಿಮ ವರದಿ ಸಲ್ಲಿಸಿದ್ದಾರೆ.

ಪಾಟೀ ಸವಾಲುಃ ಅರ್ಜಿದಾರರ ಪರ ವಕೀಲರಿಂದ -

ಅರ್ಜಿದಾರರು ದೂರನ್ನು ನೀಡಿಲ್ಲ ಎಂದರೆ ಸರಿ. ಕೆಎ 17 ಇ ಎನ್ 4682 ರ ಬೈಕಿನ ಯಾವ ಅಪರಾದಕ್ಕೆ ಅಂತಿಮ ವರದಿ ಸಲ್ಲಿಸಿದ್ದಾರೆ ಎಂದರೆ ಎರಡೂ ವಾಹನಗಳು ಅಪಘಾತದಲ್ಲಿ ಇದ್ದ ಕಾರಣಕ್ಕಾಗಿ ಅಂತಿಮ ವರದಿ ಸಲ್ಲಿಸಲಾಗಿದೆ ಎಂದು ಉತ್ತರಿಸಿರುತ್ತಾರೆ. ಇಬ್ಬರ ತಪ್ಪಿನಿಂದಲೂ ಅಪಘಾತವಾಗಿದೆ ಎಂದು ಅಂತಿಮ ವರದಿ ಸಲ್ಲಿಸಿದ್ದಾರೆ. ನಾವು ಅಂತಿಮ ವರದಿಯ ಪಕ್ಷಗಾರರಲ್ಲದ ಕಾರಣ ಅಂತಿಮ ಪ್ರಶ್ನಿಸಿರುವುದಿಲ್ಲ. ಸಾಕ್ಷಿಗೆ ಅಂತಿಮ ವರದಿ ತೋರಿಸಿ ಅದರಲ್ಲಿ 2 ನೇ ಆರೋಪಿಯ ವಿರುದ್ಧ ಅಂತಿಮ ವರದಿ ಸಲ್ಲಿಸಿಲ್ಲ ಎಂದು ನಮೂದು ಮಾಡಲಾಗಿದೆ ಎಂದರೆ ಸರಿ ಎಂದು ಉತ್ತರಿಸಿರುತ್ತಾರೆ. ಅಂತಿಮ ವರದಿಯ ಸಂಕ್ಷಿಪ್ತ ಸಾರಾಂಶವನ್ನು ಓದಿ ಹೇಳಲಾಗಿ ಸಾಕ್ಷಿ ಅದನ್ನು ಆ ರೀತಿ ಬರೆದಿದ್ದಾರೆ ಸರಿಯಾದ ತನಿಖೆ ಮಾಡಿಲ್ಲ ಎಂದು ಉತ್ತರಿಸಿರುತ್ತಾರೆ. ಪರಿಹಾರ ನೀಡಬೇಕಾಗುತ್ತದೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅರ್ಜಿದಾರರು ಚಿಕಿತ್ಸೆ ಪಡೆದ ವೈದ್ಯರ ಬಳಿ ಅಂಗನ್ಯೂನತೆ ಪ್ರಮಾಣ ಪತ್ರ ಪಡದಿದ್ದರೂ

ಸಹ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. 1 ನೇ ಎದುರುದಾರ ನ್ಯಾಯಾಲಯಕ್ಕೆ ಡಿ ಎಲ್ ನೀಡಿರುವ ಬಗ್ಗೆ ನನಗೆ ಮಾಹಿತಿ ಇಲ್ಲ. ಆತನಿಗೆ ಡಿ ಎಲ್ ಇದ್ದ ಕಾರಣ ನಾವೇ ಪರಿಹಾರ ನೀಡಬೇಕು ಎಂದರೆ ಸರಿಯಲ್ಲ. ಪರಿಹಾರ ನೀಡಬೇಕಾಗುತ್ತದೆ ಎನ್ನುವ ಕಾರಣ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ

(ಬಹಿರಂಗ ನ್ಯಾಯಾಲಯದಲ್ಲಿ ನನ್ನ ಹೇಳಿಕೆ ಮೇರೆಗೆ ಬೆರಳಚ್ಚು ಮಾಡಿಸಲಾಯಿತು).

ಓ.ಹೇ.ಕೇ.ಸ.ಸ.ಇದೆ.

ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿಜೆಎಂ
ನ್ಯಾಯಾಲಯ, ದಾವಣಗೆರೆ